ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ

ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವಿಧರರ ಕ್ಷೇತ್ರ) :-

363(397) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಕೇಂದ್ರ ಕಛೇರಿ ಮತ್ತು ಸದರಿ ಕಂಪನಿಯ ಅಧೀನದ ಕಛೇರಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಖಾಯಂ, ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಕ್ರಮಕೈಗೊಂಡಿದೆಯೇ;

(ಉ) ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು; ಇಲ್ಲವಾದಲ್ಲಿ, ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು ?